ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2138
ಸದಸ್ಯರ ಹೆಸರು : ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 25.03.2021
ಉತ್ತರಿಸುವ ಸಚಿವರು : ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ	ಮೈಸೂರು ನಗರ ಮಹಾರಾಜ ಕಾಲೇಜು ಮೈದಾನದ ಬಳಿ ಹಾಗೂ ಅಲ್ಲಿರುವ ಮಹಿಳಾ ವಿದ್ಯಾರ್ಥಿ ನಿಲಯದ ಬಳಿ ಪುಂಡು ಪೋಕರಿಗಳ ಹಾವಳಿ ಹೆಚ್ಚಾಗಿದ್ದು, ಅಲ್ಲಿ ಸಂಚರಿಸುವ ಸುತ್ತಮುತ್ತಲಿನ ವಿದ್ಯಾರ್ಥಿನಿಯರಿಗೆ ಹಾಗೂ ಮಹಿಳೆಯರಿಗೆ ದಿನನಿತ್ಯ ತೊಂದರೆ-ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;	ಇಲ್ಲ.
ಆ	ಹಾಗಿದ್ದಲ್ಲಿ, ಈ ಬಗ್ಗೆ ವಿದ್ಯಾರ್ಥಿನಿಯರಿಂದ ದೂರುಗಳು ಬಂದಿವೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸೂಕ್ತ ಕ್ರಮ ಜರುಗಿಸಿ ವಿದ್ಯಾರ್ಥಿನಿಯರಿಗೆ/ ಮಹಿಳೆಯರಿಗೆ ನಿರ್ಭಯ ವಾತಾವರಣ ಉಂಟು ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?	ವಿದ್ಯಾರ್ಥಿನಿಯರಿಂದ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ. ಆದಾಗ್ಯೂ ಮುನ್ನೆಚ್ಚರಿಕೆ ಕ್ರಮವಾಗಿ 112 ತುರ್ತು ಸ್ಪಂದನ ವಾಹನ, ಚೀತಾ ದ್ವಿಚಕ್ರ ವಾಹನ ಹಾಗೂ ಹಗಲು ಗಸ್ತಿನ ಸಿಬ್ಬಂದಿಗಳನ್ನು ಆಗಾಗ್ಗೆ ಮಹಾರಾಜ ಕಾಲೇಜು ಮೈದಾನದ ಬಳಿ ಹಾಗೂ ಅಲ್ಲಿರುವ ಮಹಿಳಾ ವಿದ್ಯಾರ್ಥಿ ನಿಲಯದ ಬಳಿ ಗಸ್ತು ಮಾಡಲಾಗುತ್ತಿದೆ.

ಹೆಚ್‌ಡಿ 214 ಎಸ್‌ಎಸ್‌ಟಿ 2021

(ಬಸವರಾಜ ಬೊಮ್ಮಾಯಿ)
ಗೃಹ ಮತ್ತು ಕಾನೂನು, ಸಂಸದೀಯ
ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು